# **ಪ್ರಥಮ ದರ್ಜೇ ನ್ಯಾಯಿಕ ದಂಡಾಧಿಕಾರಿಗಳ ನ್ಯಾಯಾಲಯ ಶಹಾಬಾದ**

**CC No.938/2024**
**CW: 02 P W : 02**
**ಸಾಕ್ಷಿಯನ್ನು ಪ್ರಮಾಣೀಕರಿಸಿದ ದಿನಾಂಕ : 16.04.2026**

| | |
|---|---|
| ಹೆಸರು | : ನಾಗಣ್ಣ |
| ತಂದೆಯ ಹೆಸರು | : ಬಸ್ಸಣ್ಣ |
| ವಯಸ್ಸು | : 43 |
| ಉದ್ಯೋಗ | : ಒಕ್ಕಲುತನ |
| ವಾಸಸ್ಥಳ | : ರಾವೂರು |

**ಮುಖ್ಯ ವಿಚಾರಣೆ : ಸಹಾಯಕ ಸರ್ಕಾರಿ ಅಭಿಯೋಜಕರಿಂದ**

ಚಾಸಾ 1 ಹಾಗೂ ಚಾಸಾ-3 ಇವರ ಪರಿಚಯ ನನಗೆ ಇರುತ್ತದೆ. ನಿ.ಪಿ.1 ರ ಮೇಲಿರುವ ಸಾಕ್ಷಿದಾರರು ತಮ್ಮ ಸಹಿಯನ್ನು ನೋಡಿ ಗುರುತಿಸಿದ್ದು, ಅದನ್ನು ನಿ.ಪಿ.1 (ಬಿ) ಎಂದು ನಿಶಾನೆಗೊಳಿಸಲಾಯಿತು.

ಯಾವ ಕಾರಣಕ್ಕಾಗಿ ನಾನು ನಿ.ಪಿ.1 ರ ಮೇಲೆ ಸಹಿ ಹಾಕಿರುತ್ತೇನೆ ಎಂದು ನನಗೆ ಹೇಳಲು ಬರುವುದಿಲ್ಲ. ನನ್ನ ಸಮಕ್ಷಮ ಪೋಲೀಸರು ನಿ.ಪಿ.1 ರಂತೆ ಯಾವುದೇ ಪಂಚನಾಮೆ ಮಾಡಿರುವುದಿಲ್ಲ. ನನ್ನ ಸಮಕ್ಷಮ ಪೋಲೀಸರು ಪಂಚನಾಮೆಯನ್ನು ಮಾಡಿ ಯಾವುದೇ ವಸ್ತುಗಳನ್ನು ಜಪ್ತುಪಡಿಸಿಕೊಂಡಿರುವುದಿಲ್ಲ. ನಿ.ಪಿ.1 ರಲ್ಲಿ ಬರೆದಿರುವ ಸಂಗತಿಗಳ ಬಗ್ಗೆ ನನಗೆ ಮಾಹಿತಿ ಇರುವುದಿಲ್ಲ.

**(ಈ ಹಂತದಲ್ಲಿ ಸ.ಸ.ಅ ರವರು ಸಾಕ್ಷಿಯನ್ನು ಪ್ರತಿಕೂಲ ಸಾಕ್ಷಿ ಎಂದು ಪರಿಗಣಿಸಿ ಪಾಟೀ ಸವಾಲಿಗೆ ಅನುಮತಿ ಕೋರಿರುತ್ತಾರೆ, ಅನುಮತಿ ನೀಡಲಾಯಿತು)**

**ಪಾಟೀ ಸವಾಲು : ಸಹಾಯಕ ಸರ್ಕಾರಿ ಅಭಿಯೋಜಕರಿಂದ**

ದಿ.17-10-2023 ರಂದು ಮಧ್ಯಾಹ್ನ 1.30 ರಿಂದ 02.30 ರವೆಗೆ ಲಕ್ಷ್ಮಿಪೂರ ಗ್ರಾಮದ ಆರೋಪಿತರ ಮನೆಯಲ್ಲಿ ನಿ.ಪಿ.1 ರಂತೆ ಪಂಚನಾಮೆಯನ್ನು ಕೈಗೊಂಡು ಸ್ಥಳದಿಂದ ಕಳ್ಳಭಟ್ಟಿ ಸರಾಯಿ ಹಾಗೂ ಬೆಲ್ಲದ ಕೊಳಯನ್ನು ಚಾಸಾ-1 ಇವರು ನನ್ನ ಮತ್ತು ಚಾಸಾ-3 ಇವರು ಸಮಕ್ಷಮ ಜಪ್ತಿಪಡಿಸಿಕೊಂಡಿರುತ್ತಾರೆ ಎಂದರೆ ಸರಿಯಲ್ಲ. ನಿ.ಪಿ.1 ರಲ್ಲಿ ಬರೆದಿರುವ ಸಂಗತಿಗಳ ಬಗ್ಗೆ ಮಾಹಿತಿ ಇದ್ದರೂ ಸಹ ಸುಳ್ಳು ಸಾಕ್ಷಿ ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ.

**ಪಾಟೀ ಸವಾಲು : ಆರೋಪಿ ಪರ ವಕೀಲರಿಂದ**

ಈ ಹಂತದಲ್ಲಿ ಆರೋಪಿ ಪರ ವಕೀಲರು ಪಾಟೀ ಸವಾಲು ಏನೂ ಇಲ್ಲ ಎಂದು ತಿಳಿಸಿರುತ್ತಾರೆ.

ಮರುವಿಚಾರಣೆ : ಇಲ್ಲ.

**(ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನದಂತೆ ಬೆರಳಚ್ಚು ಮಾಡಲಾಯಿತು)**

**ಓ. ಹೇ. ಕೇ. ಸರಿ ಇದೆ.**

**Sd/-**
**ಪ್ರ.ದ.ನ್ಯಾ.ದಂ ಗಳು, ಶಹಾಬಾದ**